ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಮೂಲಗೇಣಿ ಪದ್ಧತಿಯ ರದ್ದತಿ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1128 (1351) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಉಡುಪಿ ಮತ್ತು ಉತ್ತರ ಕನ್ನಡ ಕರಾವಳಿಯ ಜಿಲ್ಲೆಗಳಲ್ಲಿ ಮೂಲಗೇಣಿ ಪದ್ಧತಿಯ ರದ್ದತಿ ಬಗ್ಗೆ ಕಾನೂನು ರಚಿಸಿದ್ದರೂ, ಇನ್ನೂ ಈ ಸಮಸ್ಯೆಯನ್ನು ಇತ್ಯರ್ಥಪಡಿಸುವಲ್ಲಿ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು ; ಪ್ರಸ್ತುತ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ನ್ಯಾಯಾಲಯದಲ್ಲಿ ವಾದ ಮಾಡಲು ಹೆಚ್ಚುವರಿ ವಕೀಲರನ್ನು ನೇಮಿಸದೇ ಈ ಪ್ರಕರಣ ನ್ಯಾಯಾಲಯದಲ್ಲಿ ಇತ್ಯರ್ಥ ಪಡಿಸಲು ಕ್ರಮಕೈಗೊಂಡಿಲ್ಲ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಮೂಲಗೇಣಿದಾರರನ್ನು ಮೂಲಿದಾರರು ಸರ್ಕಾರದ ಕಾನೂನನ್ನು ಜಾರಿಗೊಳಿಸುವಂತೆ ಒತ್ತಡ ಹೇರುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)